# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಚೌಡೇಶ್ವರಿ ವಾರ್ಡ್ ನಂ-02ರಲ್ಲಿ

## ದಿನಾಂಕ: 20-11-2021 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ಕೆ.ಎ.ಶಾಂತರಾಜ್ ನೋಡಲ್ ಅಧಿಕಾರಿಗಳು.
2. ಶ್ರೀ.ಚಂದ್ರಕಾಂತ್‌ರಾಜ್ ಪಿ.ಎ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ.ಬಾಬು ರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಹವಮಾನ ವೈಪರಿತ್ಯದಿಂದ ಭಾರಿ ಮಳೆ ಸುರಿಯುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಿ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಬಿದ್ದಿರುವ ಪಾಟ್‌ಹೋಲ್‌ಗಳನ್ನು ಮುಚ್ಚುವಂತೆ ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ವಾರ್ಡ್‌ನ ಅಧಿಕಾರಿಗಳಿಗೆ ಸೂಚಿಸಿದರು.

2. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಹವಮಾನ ವೈಪರಿತ್ಯದಿಂದ ಭಾರಿ ಮಳೆ ಸುರಿಯುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಿ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಶೊಲ್ಡರ್ ಡ್ರೈನ್‌ಗಳನ್ನು ತೆರೆಯಲು ಹಾಗೂ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಸುವಂತೆ ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ವಾರ್ಡ್‌ನ ಅಧಿಕಾರಿಗಳಿಗೆ ಸೂಚಿಸಿದರು.

3. ವಾರ್ಡ್‌ನ ವ್ಯಾಪ್ತಿಯಲ್ಲಿರುವ ಯಲಹಂಕ ಪುಟ್ಟೇನಹಳ್ಳಿ ಕೆ.ಹೆಚ್.ಬಿ ಕಾಲೋನಿ ಹಾಗೂ ಜೆ.ಪಿ.ಕಾಲೋನಿಯಲ್ಲಿ ಬೀದಿ ದೀಪಗಳ ನಿರ್ವಹಣೆ ಮಾಡುತ್ತಿರುವುದಿಲ್ಲ ಎಂದು ಸಾರ್ವಜನಿಕರು ದೂರು ನೀಡಿದ್ದು, ಸದರಿ ದೂರಿನನ್ವಯ ಸ್ಥಳ ಪರಿಶೀಲನೆ ಮಾಡಿ ಬೀದಿ ದೀಪ ರಿಪೇರಿ ಮಾಡಿಸಿಕೊಡಲು ನೋಡೆಲ್ ಅಧಿಕಾರಿಗಳು ಸೂಚಿಸಿದರು.

4. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಸ್ತುಗಳನ್ನು ಸಮರ್ಪಕವಾಗಿ ಸಂಗ್ರಹಣೆ ಹಾಗೂ ನಿರ್ವಹಣೆ ಮಾಡುವಂತೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

23/11/2021
ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

23/11/2021
ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.